# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ   Kannada Daily

ಹಾಸನ   E-mail : kannadapostnews@gmail.com   / ಕನ್ನಡ post   Price: ₹1

Vol.No.01 | Issue. 249 | Pages. 2 | Date: 16-08-2025, SATURDAY   RNI NO: KARKAN/2024/89601

ಸಂಪುಟ : 01 - ಸಂಚಿಕೆ : 249 - ಪುಟಗಳು : 2   16-08-2025 ಶನಿವಾರ   Ph: 8762954248   ದರ : ₹1


# ತ್ಯಾಗ ಬಲಿದಾನದ ಸ್ವಾತಂತ್ರ್ಯ ಉಳಿಸಿಕೊಳ್ಳೋಣ

## ಜಿಲ್ಲಾದ್ಯಂತ ಅರ್ಥಪೂರ್ಣ ಸ್ವಾತಂತ್ರ್ಯೋತ್ಸವ | ಸಾಂಸ್ಕೃತಿಕ ಕಾರ್ಯಕ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ದೇಶಕ್ಕೆ ಸ್ವಾತಂತ್ರ್ಯವನ್ನು ಬ್ರಿಟಿಷರು ಕೊಟ್ಟಿದ್ದಲ್ಲ, ಬದಲಾಗಿ ಭಾರತೀಯರು ಸತತ ಹೋರಾಟ, ಸಂಘರ್ಷ, ತ್ಯಾಗ ಬಲಿದಾನದ ಮೂಲಕ ಪಡೆದ ಫಲವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಹೇಳಿದರು.

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ಶುಕ್ರವಾರ ಏರ್ಪಡಿಸಿದ್ದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಸ್ವಾತಂತ್ರ್ಯ ದಿನಾಚರಣೆ ಸಂದೇಶ ನೀಡಿದ ಅವರು ನಾವು ಭಾರತೀಯರಾಗಿ ಬದುಕುತ್ತಿದ್ದೇವೆ. ಸ್ವತಂತ್ರವಾಗಿ ಉಸಿರಾಡುತ್ತಿದ್ದೇವೆ, ಯಾರದೋ ದಾಸ್ಯದಲ್ಲಿ ಬದುಕುತ್ತಿಲ್ಲ ಎಂದರೆ ಅದಕ್ಕೆ ಕಾರಣ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿ ಮಡಿದಂತ ಮಾನ್ಯರು. ಮನೆ ಮಠ ಸರ್ವಸ್ವವನ್ನು ಬಿಟ್ಟು ಅವರುಗಳು ಹೋರಾಟ ಮಾಡಿದ್ದಾರೆ. ಅವರ ತ್ಯಾಗ ಬಲಿದಾನ ಹೋರಾಟವನ್ನುಎಂದೆಂದಿಗೂ ಸ್ಮರಿಸಬೇಕು ಎಂದರು.

ಸ್ವಾತಂತ್ರ್ಯ ಹೋರಾಟದಲ್ಲಿ ಕರ್ನಾಟಕ ಮತ್ತು ಜಿಲ್ಲೆಯ ಅನೇಕ ಮಹನೀಯರು ಅವರದ್ದೆ ಆದ ಕೊಡುಗೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಅವರನ್ನು ಸ್ಮರಿಸುವುದು ನಮ್ಮ ಧರ್ಮಎಂದರು.

ಸ್ವಾತಂತ್ರ್ಯ ಬಂದು 79 ವರ್ಷವಾಗಿರುವ ಇಂದು ಅನೇಕ ರೀತಿಯಲ್ಲಿ ನಮ್ಮ ದೇಶವು ಪ್ರಗತಿ ಸಾಧಿಸಿದೆ. ಆದರೂ ಮತ್ತೊಂದು ಕಡೆ ಅನೇಕ ಆತಂಕಗಳು ಕೂಡ ನಮ್ಮನ್ನು ಕಾಡುತ್ತಿವೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಗಳು ನಮ್ಮಆಧಾರ ಸ್ತಂಭ, ಚುನಾವಣೆಗಳು ಪಾರದರ್ಶಕವಾಗಿ ನಡೆದಲ್ಲಿ ಮಾತ್ರ ಪ್ರಜಾಪ್ರಭುತ್ವ ವ್ಯವಸ್ಥೆ ನಂಬಿಕೆಯಿಂದ ದೃಢವಾಗಿ ಕೆಲಸ ಮಾಡುತ್ತದೆ. ಇಂದು ಚುನಾವಣಾ ವ್ಯವಸ್ಥೆಯ ಮೇಲೆ ನಾನಾ ರೀತಿಯ ಪ್ರಶ್ನೆಗಳು ಹುಟ್ಟುತ್ತಿವೆ. ಚುನಾವಣಾ ಆಯೋಗವು ನಿಷ್ಪಕ್ಷಪಾತವಾಗಿ ಕೆಲಸ ಮಾಡಬೇಕು ಎನ್ನುವುದು ಪ್ರತಿಯೊಬ್ಬ ಪ್ರಜೆಯ ಆಶಯ ಎಂದು ಹೇಳಿದರು.

ಚುನಾವಣೆ ಆಯೋಗ ಪಾರದರ್ಶಕವಾಗಿ ನ್ಯಾಯ ಸಮ್ಮತವಾಗಿದ್ದರೆ ನಾವು ಕಷ್ಟಪಟ್ಟು ಗಳಿಸಿದ ಸ್ವಾತಂತ್ರ್ಯವನ್ನು ಉಳಿಸಿಕೊಳ್ಳಲು ಸಾಧ್ಯ. ಸ್ವಾತಂತ್ರ್ಯವನ್ನು ನಾವೇ ಕಳೆದುಕೊಳ್ಳುವಂತೆ ಆಗಬಾರದು. ಈ ನಿಟ್ಟಿನಲ್ಲಿಪ್ರತಿಯೊಬ್ಬರು ಎಚ್ಚೆತ್ತುಕೊಳ್ಳಬೇಕು. ಪ್ರಜಾಪ್ರಭುತ್ವ ವ್ಯವಸ್ಥೆ ಜೀವ ಕಳೆದುಕೊಳ್ಳದ ರೀತಿಯಲ್ಲಿ ಚುನಾವಣಾ ಆಯೋಗ ಕೆಲಸ ಮಾಡಬೇಕು ಎಂದು ತಿಳಿಸಿದರು.

### ತಲಾ ಆದಾಯದಲ್ಲಿ ನಂಬರ್ 1

ದೇಶದಲ್ಲಿ ಅತೀ ಹೆಚ್ಚು ಸರಾಸರಿ ತಲಾ ಆದಾಯ ಹೊಂದಿರುವ ರಾಜ್ಯಗಳಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿದೆ. ಅದೇರೀತಿಯಾಗಿದೇಶದಲ್ಲಿಎರಡನೇಅತೀ ಹೆಚ್ಚು ತೆರಿಗೆ ಕಟ್ಟುವ ರಾಜ್ಯ ಕರ್ನಾಟಕವಾಗಿದೆ. ಇದಕ್ಕೆ ಗ್ಯಾರಂಟಿ ಯೋಜನೆಗಳು ಮತ್ತು ಕಷ್ಟಪಟ್ಟು ದುಡಿಯುವ ನಮ್ಮ ಕನ್ನಡಿಗರು ಕಾರಣರಾಗಿದ್ದಾರೆ ಎಂದು ಹೇಳಿದರು.

ಇಂದು ದೇಶ ಆರ್ಥಿಕವಾಗಿ ಅಭಿವೃದ್ಧಿ ಹೊಂದುತ್ತಿದೆ ಎಂದರೆ ಅದರಲ್ಲಿ ಬಹಳ ದೊಡ್ಡ ಪಾಲು ಕನ್ನಡಿಗರು ಸಹ ಕೊಡುತ್ತಿದ್ದೇವೆ. ನಮ್ಮ ದುಡಿಮೆ ಇಂದು ದೇಶದ ಪ್ರಗತಿಗೆ ಸಹಾಯವಾಗುತ್ತಿದೆ.




### ಸನ್ಮಾನಿತರ ವಿವರ

ಸಮಾಜ ಸೇವಾ ಕ್ಷೇತ್ರದಲ್ಲಿ ಸೈಯದ್‌ಉಮರ್ ಪಾರೂಕ್, ಪತ್ರಿಕೋದ್ಯಮ ಕ್ಷೇತ್ರದಲ್ಲಿ ಡಿ.ಡಿ ನ್ಯೂಸ್ ವರದಿಗಾರ ಹೆಚ್.ಎನ್. ಜ್ಞಾನೇಶ್ವರ್, ಜೇನುಗಿರಿ ಪತ್ರಿಕೆಯ ಸಂಪಾದಕ ಪ್ರಸನ್ನಕುಮಾರ್, ಹೋಂ ಗಾರ್ಡ್ಸ್ ಕ್ಷೇತ್ರದಲ್ಲಿ ಬಿ.ಆರ್. ಹರೀಶ್‌ಕುಮಾರ್, ಅಗ್ನಿಶಾಮಕ ಕ್ಷೇತ್ರದಲ್ಲಿ ಎ.ಆರ್. ನಿಂಗರಾಜು, ಕ್ರೀಡಾ ಕ್ಷೇತ್ರದಲ್ಲಿ ಕರಾಟೆ ಕ್ರೀಡಾಪಟು ಅನುಷ್ಕಾ ಆರ್.ವಿ, ಜಿಮ್ನಾಸ್ಟಿಕ್ ಕ್ರೀಡಾಪಟು ಶ್ರೀಶಗೌಡ ಕೆ.ಎನ್, ಪೌರಕಾರ್ಮಿಕರ ಕ್ಷೇತ್ರದಲ್ಲಿ ಸಣ್ಣಪ್ಪಯ್ಯ, ಸೇನಾ ಕ್ಷೇತ್ರದಲ್ಲಿ ರಂಗೇಗೌಡ ಆರ್.ಎಲ್, ಕಲಾವಿದರ ಕ್ಷೇತ್ರದಿಂದ ಯೋಗೀಶ್ ಅವರನ್ನು ಅಭಿನಂದಿಸಲಾಯಿತು.

ಸ್ವಾತಂತ್ರ್ಯ ಬಂದ ನಂತರ ಬಡವರು ಶ್ರೀಮಂತರ ನಡುವಿನ ಅಂತರವನ್ನುಕಡಿಮೆ ಮಾಡುತ್ತಾ ಬಂದಿದ್ದೇವೆ. ಆದರೆ ಪುನಃ ಶ್ರೀಮಂತರು ಬಡವರ ನಡುವಿನ ಅಂತರ ದಿನೇ ದಿನೇ ಹೆಚ್ಚಾಗುತ್ತಿದೆ. ಸಾಮಾನ್ಯ ಜನರು ಕಷ್ಟಪಟ್ಟು ದುಡಿದ ದುಡಿಮೆ, ದೇಶದ ಸಂಪತ್ತಿನಲ್ಲಿ ಬಹುಪಾಲು ಇಂದು ಕೆಲವೇ ಕೆಲವು ಶ್ರೀಮಂತರ ಪಾಲಾಗುತ್ತಿದೆ. ಇದು ದೇಶದ ಭವಿಷ್ಯಕ್ಕೆ ಒಳ್ಳೆಯದಲ್ಲ. ರಾಷ್ಟ್ರ ಸುಭದ್ರವಾಗಿ ಇರಬೇಕೆಂದರೆ ಶ್ರೀಮಂತರು ಬಡವರ ನಡುವಿನ ಅಂತರ ಕಡಿಮೆ ಮಾಡಬೇಕು ಎಂದರು.

ದೇಶದ ಆರ್ಥಿಕತೆಯಲ್ಲಿ ಪ್ರತಿಯೊಬ್ಬರಿಗೂ ಸಮಪಾಲು ಸಿಗಬೇಕು ಎಂದು ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನ ಮಾಡಿ ಜನರಲ್ಲಿ ಆರ್ಥಿಕ ಶಕ್ತಿಯನ್ನು ತುಂಬುವ ಕೆಲಸವನ್ನು ಮಾಡುತ್ತಿದೆ. ನಮ್ಮ ಸರ್ಕಾರ ಎರಡು ವರ್ಷ ಪೂರೈಸಿದೆ. ಈ ಎರಡು ವರ್ಷದಲ್ಲಿ ನಾಲ್ಕುವರೆ ಕೋಟಿ ಕನ್ನಡಿಗರಿಗೆ ಇಲ್ಲಿಯವರೆಗೆ ಒಂದು ಲಕ್ಷ ಕೋಟಿ ರೂಪಾಯಿಗಳನ್ನು ನೇರವಾಗಿ ಅವರ ಖಾತೆಗೆ ಜಮೆ ಮಾಡುವ ಮೂಲಕ ಕನ್ನಡಿಗರಿಗೆ ಶಕ್ತಿ ತುಂಬುವ ಕೆಲಸ ಮಾಡುತ್ತಿದ್ದೇವೆ ಎಂದರು.

### ಮೆಚ್ಚುಗೆ ಪಡೆದ ಸಾಂಸ್ಕೃತಿಕ ಕಾರ್ಯಕ್ರಮ

ಸ್ವಾತಂತ್ರ್ಯ ದಿನಾಚರಣೆಯಲ್ಲಿ ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ವೈಭವಯುತವಾಗಿ ಮೂಡಿಬಂತು. ಎಸ್.ಆರ್.ಪಿ, ಡಿ.ಎ.ಆರ್, ನಾಗರೀಕ ಪೊಲೀಸ್ ತಂಡ, ಮಹಿಳಾ ಪೊಲೀಸ್ ತಂಡ, ಗೃಹ ರಕ್ಷಕ ದಳ, ಅರಣ್ಯ ಇಲಾಖೆ ತಂಡ, ಅಬಕಾರಿ ಇಲಾಖೆ ತಂಡ, ಎನ್.ಸಿ.ಸಿ, ಸೇವಾದಳ ಹಾಗೂ ಶಾಲಾ ಮಕ್ಕಳು ಸೇರಿದಂತೆಒಟ್ಟು 38 ತುಕಡಿಗಳಿಂದ ಆಕರ್ಷಕ ಪಥಸಂಚಲನ ನಡೆಯಿತು.



ನಮ್ಮ ಗ್ಯಾರಂಟಿ ಯೋಜನೆಗಳ ಪ್ರಯೋಜನಕ್ಕಾಗಿ ಯಾವ ಕಚೇರಿಯ ಬಳಿಯಲ್ಲಿಯೂ ಸಾಲಾಗಿ ನಿಲ್ಲುವ, ಬಾಗಿಲನ್ನು ಕಾಯುವಂತಹ ಅವಶ್ಯಕತೆಯೂ ಇಲ್ಲ. ಜೊತೆಗೆ ಯಾವುದೇ ರೀತಿಯ ಲಂಚವಿಲ್ಲದೆಯೇ ಯಾವ ಮಧ್ಯವರ್ತಿಗೂ ಕೈಜೋಡಿಸುವ ಅವಶ್ಯಕತೆ ಇಲ್ಲದಂತೆ ಯೋಜನೆಗಳ ಪಡೆದುಕೊಳ್ಳುವ ಅವಕಾಶವನ್ನು ಮಾಡಿಕೊಟ್ಟಿದ್ದೇವೆ. ಬಹುಶಃ ಪ್ರಪಂಚದಲ್ಲಿ ಈ ರೀತಿಯಲ್ಲಿ ಜನರಿಗೆ ಪಾರದರ್ಶಕವಾಗಿ ಆರ್ಥಿಕ ಶಕ್ತಿಯನ್ನುತುಂಬುವ ಯೋಜನೆ ಮತ್ತೊಂದು ಇಲ್ಲ ಎಂದು ತಿಳಿಸಿದರು.

ರಾಜ್ಯದಲ್ಲಿ ಕಳೆದ ವರ್ಷದಂತೆ ಈ ವರ್ಷವೂಉತ್ತಮ ಮಳೆಯಾಗಿರುವುದು ರೈತರ ಬದುಕನ್ನು ಹಸನಾಗಿಸಿ ರೈತರಮುಖದಲ್ಲಿ ಮಂದಹಾಸ ಮೂಡುವಂತೆ ಮಾಡಿದೆಎಂದರು. ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ. ಸ್ವರೂಪ್, ಮಹಾನಗರ ಪಾಲಿಕೆ ಮೇಯರ್ ಎಂ. ಚಂದ್ರೇಗೌಡ, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಆರ್.ಪೂರ್ಣಿಮಾ ಮತ್ತಿತರರು ಹಾಜರಿದ್ದರು.

## ಸ್ವಾತಂತ್ರ್ಯ ಹೋರಾಟಗಾರ ಮುದ್ದೇಗೌಡರಿಗೆ ಸನ್ಮಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ನಗರದ ಮಲೆನಾಡು ತಾಂತ್ರಿಕ ಕಾಲೇಜಿನ ಅಲ್ಯುಮ್ನಿ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ದಿ. ಹಾರನಹಳ್ಳಿ ರಾಮಸ್ವಾಮಿ ಅವರ ಸ್ಮರಣಾರ್ಥ ಸಮಾರಂಭದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಜಿ.ಎಲ್. ಮುದ್ದೇಗೌಡ ಅವರನ್ನು ಸನ್ಮಾನಿಸಲಾಯಿತು.



ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಜೀವನದಲ್ಲಿ ಉತ್ತಮ ಮೌಲ್ಯ, ಪರೋಪಕಾರ ಗುಣ ಹಾಗೂ ಸಂಸ್ಕಾರ ಅಳವಡಿಸಿಕೊಂಡು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈ ಜೋಡಿಸಬೇಕು ಎಂದು ಹೇಳಿದರು.

ದೇಶದ್ಯಾಂತ ಸ್ವಾತಂತ್ರ್ಯ ದಿನ ಆಚರಿಸಲಾಗುತ್ತಿದೆ. ಇಂತಹ ಸಂದರ್ಭದಲ್ಲಿ ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಮತ್ತು ಎಂಜಿನಿಯರಿಂಗ್ ಕಾಲೇಜು ವತಿಯಿಂದ ಸನ್ಮಾನ ಮಾಡಿರುವುದು ಸಂತೋಷ ತಂದಿದೆ. ನಾವು ಹುಟ್ಟಿದ ಮೇಲೆ ಏನಾದರು ಸಾಧನೆ ಮಾಡಬೇಕು. ಜೀವನದಲ್ಲಿ ಸಾಮಾಜಿಕ ಮೌಲ್ಯಗಳನ್ನು ರೂಢಿಸಿಕೊಂಡು ಸಮಾಜದ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಬೇಕು ಎಂದರು. ಹಾಸನದಲ್ಲಿ ಮಲೆನಾಡು ಎಂಜಿನಿಯರಿಂಗ್ ಕಾಲೇಜು ಪ್ರಾರಂಭವಾಗಲು ಹಲವರು ಶ್ರಮಿಸಿದ್ದಾರೆ. ಅವರ ಹೆಸರಿನಲ್ಲಿ ಏನಾದರೂ ಯೋಜನೆ ರೂಪಿಸಿ ಸತ್ಕಾರ್ಯಗಳ ಮಾಡಬೇಕು. ಈ ಸಂಸ್ಥೆ ಬೆಳೆಯಲು 1960ರಲ್ಲಿ ಹಾಸನದಲ್ಲಿದ್ದ ಜಿಲ್ಲಾಧಿಕಾರಿ ಚಂದಪ್ಪ ಪಾಟೀಲ್, ಕೋಡಗಿನ ಮಲ್ಲಪ್ಪ, ನಲ್ಲೂರೇಗೌಡ, ಬೋರಣ್ಣಗೌಡ, ಯಸಳೂರ ಧರ್ಮಪ್ಪ, ಚಿಕ್ಕಮಗಳೂರು ಬಸವೇಗೌಡ, ಬಿ.ಜಿ. ಗುರಪ್ಪ, ಹಾರನಹಳ್ಳಿ ರಾಮಸ್ವಾಮಿ, ಬಿ.ಬಿ. ಶಿವಪ್ಪ ಮುಂತಾದವರ ಶ್ರಮವಿದೆ ಎಂದರು. ಮಲೆನಾಡು ಇಂಜಿನಿಯರಿಂಗ್ ಕಾಲೇಜು ಹಾಗು ವ್ಯಾಪ್ತಿಯ ಎಲ್ಲಾ ಕಾಲೇಜುಗಳು ಇವತ್ತು ಉತ್ತಮ ಸಂಸ್ಥೆ ಯಾಗಿ ಬೆಳೆದಿವೆ. ಅನೇಕರಿಗೆ ಉದ್ಯೋಗ ದೊರಕಿದೆ. ಸಾವಿರಾರು ವಿದ್ಯಾರ್ಥಿಗಳು ಇಲ್ಲಿ ವ್ಯಾಸಂಗ ಮಾಡಿ ದೇಶ ವಿದೇಶಗಳಲ್ಲಿ ನೆಲೆಸಿದ್ದಾರೆ. ಈ ಸಂಸ್ಥೆ ಇನ್ನೂ ಎತ್ತರಕ್ಕೆ ಬೆಳೆಯಲಿ ಎಂದು ಆಶಿಸಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಅಧ್ಯಕ್ಷ ಆರ್.ಟಿ. ದ್ಯಾವೇಗೌಡ ಮಾತನಾಡಿ, 98 ವರ್ಷದ ಜಿ.ಎಲ್. ಮುದ್ದೇಗೌಡ ಅವರು ಶಿಕ್ಷಣ ಕ್ಷೇತ್ರದಲ್ಲಿ, ಗಣನೀಯ ಸೇವೆ ಸಲ್ಲಿಸಿದ್ದಾರೆ. ಅವರ ಸಾಮಾಜಿಕ ಕಳಕಳಿ ಹಾಗು ಇಳಿವಯಸ್ಸಿನಲ್ಲಿಯೂ ಸಮಾಜದ ಕೆಲಸದಲ್ಲಿ ತೊಡಗಿರುವುದು ಹೆಮ್ಮೆಯ ವಿಚಾರ ಎಂದರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಚೌಡುವಳ್ಳಿ ಜಗದೀಶ್ ಮಾತನಾಡಿ, ಜಿ.ಎಲ್. ಮುದ್ದೇಗೌಡ ಅವರು ಶತಾಯುಷಿಯಾಗಿ ಸಾಮಾಜಿಕ ಕಾರ್ಯಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಸ್ವಾತಂತ್ರ್ಯ ಹೋರಾಟಗಾರರಾಗಿ, ಉದ್ಯಮಿಯಾಗಿ, ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆ ಅಮೂಲ್ಯವಾದುದು. ಇಂತಹ ಮೇರು ವ್ಯಕ್ತಿತ್ವದ ವ್ಯಕ್ತಿಯ ಜೀವನ ಶೈಲಿಯನ್ನು ಯುವಕರು ಅಳವಡಿಸಿಕೊಳ್ಳಬೇಕು ಎಂದರು. ಪ್ರಾಂಶುಪಾಲ ಡಾ. ಎ.ಜೆ. ಕೃಷ್ಣಯ್ಯ ಮಾತಾನಾಡಿ, ಹಿರಿಯರಾದ ಜಿ.ಎಲ್. ಮುದ್ದೇಗೌಡರ ಬದುಕು ನಮಗೆ ಸ್ಫೂರ್ತಿ ತಂದಿದೆ ಎಂದರು.

ಎಂಟಿಇಎಸ್ ನಿರ್ದೇಶಕ ಡಾ. ಎಸ್. ಪ್ರದೀಪ್ ಅವರು ಜಿ.ಎಲ್. ಮುದ್ದೇಗೌಡರ ಸನ್ಮಾನ ಪತ್ರ ಓದಿದರು. ಪ್ರಭಾರ ಖಜಾಂಚಿ ರಾಜಶೇಖರ್, ನಿರ್ದೇಶಕ ಶಾಂತಿಗ್ರಾಮ ಶಂಕರ್, ಎವಿಕೆ ಪಿಯು ಕಾಲೇಜು ಉಪಾಧ್ಯಕ್ಷ ನಾಗರಾಜ್ ಜೈನ್, ನಿವೃತ್ತ ಪ್ರಾಧ್ಯಾಪಕ ಡಾ. ಎಸ್. ಮೋಹನ್ ಕುಮಾರ್, ಕುಮುದ ಹಾಗೂ ಇತರರಿದ್ದರು.

## ನನ್ನ ವಿರುದ್ಧ ಮಾತನಾಡುವ ಮುನ್ನ ಹಿನ್ನೆಲೆ ಅರಿಯಿರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಅರಕಲಗೂಡು: ನನ್ನ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುತ್ತಿರುವವರು ನನ್ನ ಕಾಲೇಜಿನ ಜೀವನ, ಹೋರಾಟವನ್ನು ನೆನಪಿಸಿಕೊಂಡರೆ ಒಳ್ಳೆಯದು. ಎಲ್ಲವನ್ನು ಮೀರಿ ರಾಜಕೀಯಕ್ಕೆ ಬಂದವನಾಗಿದ್ದೇನೆ. ಈ ಬಗ್ಗೆ ಅರಿವು ಇದ್ದರೆ ಮುಂದೆ ಅವರಿಗೆ ಉತ್ತಮ ಎಂದು ಶಾಸಕ ಎ. ಮಂಜು ಕಾಂಗ್ರೆಸ್ ಮುಖಂಡ ಹೆಚ್.ಪಿ. ಶ್ರೀಧರ್ ಗೌಡರಿಗೆ ತಿರುಗೇಟು ನೀಡಿದರು.

ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿ, ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಹೆಚ್.ಪಿ. ಶ್ರೀಧರ್‌ಗೌಡ ಅಕ್ರಮ ದುಡ್ಡಿನ ದುಹಂಕಾರದಿಂದ ನನ್ನ ವಿರುದ್ಧ ಹಗುರವಾಗಿ ಮಾತನಾಡುವುದನ್ನು ನಿಲ್ಲಿಸಬೇಕು. ಈ ಧೋರಣೆ ಮುಂದುವರಿದರೆ ಕ್ಷೇತ್ರದ ಜನರು ಮುಂದಿನ ದಿನಗಳಲ್ಲಿ ಪಾಠ ಕಲಿಸುತ್ತಾರೆ. ನಾನು ಈ ವರೆಗೆ 10 ಚುನಾವಣೆ ಎದುರಿಸಿದ್ದೇನೆ. ನಾಲ್ಕು ಬಾರಿ ಶಾಸಕ, ಸಚಿವನಾಗಿ ಕ್ಷೇತ್ರದಲ್ಲಿ ಕೆಲಸ ಮಾಡಿದ್ದೇನೆ. ಕೆಲವು ದಿನಗಳ ಹಿಂದೆ ನಾನು ಪಟ್ಟಣದ ಅಭಿವೃದ್ಧಿ ಹಿನ್ನೆಲೆ ತಯಾರಾಗಿರುವ ಯೋಜನೆ ಬಗ್ಗೆ ಜನರು ಎಚ್ಚರಿಕೆ ವಹಿಸುವ ಕುರಿತು ಮಾಧ್ಯಮ ಹೇಳಿಕೆ ನೀಡಿದ್ದೆ. ಶ್ರೀಧರ್ ಗೌಡ ಅಥವಾ ನಗರ ಯೋಜನಾ ಪ್ರಾಧಿಕಾರದ ಪದಾಧಿಕಾರಿಗಳ ವಿರುದ್ಧ ಏನೂ ಮಾತನಾಡಿರಲಿಲ್ಲ. ಶಾಸಕನಾಗಿ ಜನರಿಗೆ ತಿಳಿವಳಿಕೆ ನೀಡುವುದು ನನ್ನ ಕರ್ತವ್ಯ. ಅದನ್ನು ವೈಯಕ್ತಿಕವಾಗಿ ತೆಗೆದುಕೊಂಡು ನನ್ನ ವಿರುದ್ಧ ಸಲ್ಲದ ಆರೋಪ ಮಾಡಿರುವುದನ್ನು ಸಹಿಸುವುದಿಲ್ಲ ಎಂದರು.



ಕ್ಷೇತ್ರದಲ್ಲಿ ನಾನು, ಮಾಜಿ ಸಚಿವ ಕೆ.ಬಿ. ಮಲ್ಲಪ್ಪ, ನಂಜೇಗೌಡ ಮತ್ತು ರಾಮಸ್ವಾಮಿ ಅವರು ಎಂದಿಗೂ ಕೂಡ ವೈಯಕ್ತಿಕವಾಗಿ ನಿಂದಿಸುವ ಕೆಲಸ ಮಾಡಿಲ್ಲ. ಬದಲಾಗಿ ಕ್ಷೇತ್ರದ ಅಭಿವೃದ್ಧಿ ದೃಷ್ಟಿಯಿಂದ ಆರೋಗ್ಯಕರ ಪದಬಳಕೆ ಮಾಡಿದ್ದೇವೆ. ಶ್ರೀಧರ್‌ಗೌಡ ರೇವಣ್ಣ, ಭವಾನಿ ರೇವಣ್ಣ ಅವರೊಂದಿಗೆ ಒಡನಾಟ ಇಟ್ಟುಕೊಂಡು ರಿಯಲ್ ಎಸ್ಟೇಟ್ ಮಾಡಿ ಅಕ್ರಮ ಹಣಗಳಿಕೆ ಮಾಡಿರುವುದು ಗೊತ್ತಿದೆ ಎಂದರು.

ತಾಲ್ಲೂಕಿನ ರಾಜಕೀಯ ಇತಿಹಾಸದಲ್ಲಿ ಆಣೆ ಪ್ರಮಾಣ ಇದುವರೆಗೂ ಬಂದಿರಲಿಲ್ಲ. ಅಕ್ರಮ ಹಣಗಳಿಕೆ ಮಾಡಿರುವ ಶ್ರೀಧರ್ ಗೌಡರಿಂದ ಶುರುವಾಗಿದೆ. ಈತ ಪೊಲೀಸ್ ಹೌಸಿಂಗ್ ಸೊಸೈಟಿಯಲ್ಲಿ ದುಡ್ಡು ಮಾಡಿ, ರಾಜೀನಾಮೆ ಕೊಟ್ಟು ರಾಜಕೀಯಕ್ಕೆ ಬಂದಿರುವ ಕುರಿತು ನಾನು ಪಿಟಿಸಿಎಲ್ ಸಮಿತಿಗೆ ದೂರು ಕೊಟ್ಟಿದ್ದೇನೆ. ಅದಕ್ಕೆ ಈ ರೀತಿ ನನ್ನ ವಿರುದ್ಧ ಆರೋಪ ಮಾಡಲು ಕಾರಣವಾಗಿದೆ. ಕಾನೂನು ಏನಿದೆ ಅದು ಮುಂದಿನ ದಿನಗಳಲ್ಲಿ ಆಗಲಿದೆ ಎಂದರು.

ರಾಜಕೀಯಕ್ಕೆ ಬರುವ ಆತುರದಲ್ಲಿ ಎದುರಾಳಿಗಳನ್ನು ನಿಂದಿಸುವ ಕೆಲಸಕ್ಕೆ ಯಾರೂ ಕೂಡ ಮುಂದಾಗಬಾರದು. ಇದು ನನ್ನ ಅನುಭವದ ಮಾತಾಗಿದೆ. ಮಾಜಿ ಸಚಿವ ಹೆಚ್.ಎನ್. ನಂಜೇಗೌಡರು, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ಮಾಜಿ ಸಚಿವ ಪುಟ್ಟಸ್ವಾಮಿಗೌಡರ ಮನೆಗಳನ್ನು ನಾನು ಹಾಳುಮಾಡಿದ್ದೇನೆಂಬ ಶ್ರೀಧರ್ ಗೌಡ ಹೇಳಿಕೆ ಗಮನಿಸಿದ್ದೇನೆ. ಇದು ನಿಜವಾಗಿದ್ದರೇ ಈ ಕ್ಷೇತ್ರದ ಮತದಾರರು ನನ್ನನ್ನು ಆಯ್ಕೆ ಮಾಡುತ್ತಿದ್ದರೇ ಎಂದು ಪ್ರಶ್ನಿಸಿದ ಅವರು, ದೇವೇಗೌಡರು ಚುನಾವಣೆಯಲ್ಲಿ ಸೋತು ಶೋಚನೀಯ ಸ್ಥಿತಿಯಲ್ಲಿದ್ದು ಪುನಃ ಸ್ಪರ್ಧೆ ಮಾಡಿದ ಸಂದರ್ಭದಲ್ಲಿ ನಾನು ಅವರನ್ನು ಬೆಂಬಲಿಸಿದ್ದೇನೆ. ಅದೇ ರೀತಿ ಪುಟ್ಟಸ್ವಾಮಿಗೌಡರ ಮೊಮ್ಮಗನನ್ನು ಜಿಲ್ಲಾ ಪಂಚಾಯಿತಿ ಸದಸ್ಯನಾಗಿ ಮಾಡಿದ್ದೇನೆ. ಅದೇ ರೀತಿ ನಂಜೇಗೌಡರ ಕುಟುಂಬ ನನ್ನ ಕುಟುಂಬವಾಗಿದೆ. ಅದನ್ನು ಅರ್ಥಮಾಡಿಕೊಳ್ಳದೇ ಕೇವಲ ರಾಜಕೀಯ ದ್ವೇಷದಿಂದ ಸುಳ್ಳು ಹೇಳಬಾರದು ಎಂದು ಎಚ್ಚರಿಸಿದರು.

## ಜಿಲ್ಲಾ ವರ್ತಕರ ಸಂಘದಿಂದ ಸ್ವಾತಂತ್ರ್ಯ ದಿನ

ಹಾಸನ: ಜಿಲ್ಲಾ ವರ್ತಕರ ಸಂಘದಿಂದ ನಗರದ ಸುಭಾಷ್ ಚೌಕದಲ್ಲಿ ನಡೆದ 79ನೇ ಸ್ವಾತಂತ್ರ್ಯೋತ್ಸವ ಧ್ವಜಾರೋಹಣವನ್ನು ಮಹಾನಗರ ಪಾಲಿಕೆ ಮೇಯರ್ ಎಂ. ಚಂದ್ರೇಗೌಡ ನೆರವೇರಿಸಿದರು.

ಜಿಲ್ಲಾ ವರ್ತಕರ ಸಂಘದ ಅಧ್ಯಕ್ಷ ಹೆಚ್.ಟಿ. ಶೇಖರ್ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಶಾಸಕ ಹೆಚ್.ಪಿ. ಸ್ವರೂಪ್, ಮೇಯರ್ ಎಂ. ಚಂದ್ರೇಗೌಡ ಹಾಗು ಶಬೀರ್ ಅಹ್ಮದ್, ಸದಸ್ಯ ಆರ್. ಮೋಹನ್ ಅವರನ್ನು ಸನ್ಮಾನಿಸಲಾಯಿತು.



ವರ್ತಕರಾದ ಹೆಚ್.ಎಸ್. ಇಂದ್ರಕುಮಾರ್, ಹೆಚ್.ಎಸ್. ಮಂಜುನಾಥಶೆಟ್ಟಿ, ರಂಗನಾಥ ಶೆಟ್ಟಿ, ರಘು, ಎ. ಗಫಾರ್, ವೇಣುಗೋಪಾಲ್, ಮಹಾಂತೇಶ್, ವೆಂಕಟೇಶ್, ಶ್ರೀನಿವಾಸ ಶೆಟ್ಟಿ, ಹೆಚ್.ಎಲ್. ವಿಜಯೇಂದ್ರರಾವ್, ಹೆಚ್.ಎಸ್. ಸಾಗರ್ ಮತ್ತಿತರರು ಇದ್ದರು.

ಹಾಸನ: ನಗರದ ಜೀವನ ಜ್ಯೋತಿ ಕಿವುಡು ಮತ್ತು ಮೂಗ ಮಕ್ಕಳ ಶಾಲೆಯಲ್ಲಿ 79ನೇ ಸ್ವಾತಂತ್ರ್ಯೋತ್ಸವ ಆಚರಿಸಲಾಯಿತು. ಅನನ್ಯ ಟ್ರಸ್ಟ್ ಅಧ್ಯಕ್ಷೆ ಕೆ.ಟಿ. ಜಯಶ್ರೀ, ಮುಖ್ಯಶಿಕ್ಷಕಿ ತಹಸೀನಾ ಬಾನು, ಶಿಕ್ಷಕಿಯರಾದ ರೂಪ, ಪ್ರಭಾವತಿ, ಬೋಧಕೇತರ ಸಿಬ್ಬಂದಿ ಸುಂದ್ರಮ್ಮ, ಮಂಜುಳಾ, ತಿಮ್ಮೇಗೌಡ, ಜರಿನ, ವೈಷ್ಣವಿ ಹಾಜರಿದ್ದರು.



## ಜನಾರೋಗ್ಯಕ್ಕಾಗಿ ಸತ್ಯಾಗ್ರಹ: ಸಚಿವ ಕೃಷ್ಣಬೈರೇಗೌಡ ಭೇಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಹಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪುನಾರಂಭ ಹಾಗೂ ಮೂಲಸೌಕರ್ಯ ಕಲ್ಪಿಸಬೇಕು ಎಂದು ಆಗ್ರಹಿಸಿ ಜಿಲ್ಲಾ ಜನಪರ ಚಳವಳಿಗಳ ಒಕ್ಕೂಟದಿಂದ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಮಾತನಾಡಿ, ಆಸ್ಪತ್ರೆ ಆರಂಭ ಸಂಬಂಧ ಮುಖ್ಯಮಂತ್ರಿ ಹಾಗೂ ಸಚಿವರೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದರು.

ಆರೋಗ್ಯ ವಿಚಾರ ಗಂಭೀರವಾದುದು. ನೂತನ ಆಸ್ಪತ್ರೆ ಪುನಾರಂಭಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಅಧಿಕಾರಿಗಳಿಂದ ಅಗತ್ಯ ಮಾಹಿತಿ ಪಡೆದು ಮುಂದಿನ ಕ್ರಮ ಕೈಗೊಳ್ಳುತ್ತೇನೆ ಎಂದು ಹೇಳಿದರು.

ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಮಾತನಾಡಿ, ಆಸ್ಪತ್ರೆ ಕಾರ್ಯಾರಂಭವಾಗಬೇಕೆಂದರೆ ಬಾಕಿ ಕಾಮಗಾರಿ,ಯಂತ್ರೋಪಕರಣ, ತಜ್ಞ ವೈದ್ಯರು, ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿ ನೇಮಕಾತಿಗಾಗಿ 60 ಕೋಟಿ ರೂ. ಬಿಡುಗಡೆ ಮಾಡಬೇಕು. ರೋಗ ತಪಾಸಣೆ ಮತ್ತು ಚಿಕಿತ್ಸೆ ನೀಡಲು ವೈದ್ಯಕೀಯ ವಿಭಾಗ, ಕ್ಯಾಥ್ ಲ್ಯಾಬ್, ಪ್ರತ್ಯೇಕ ಶಸ್ತ್ರಚಿಕಿತ್ಸಾ ಘಟಕ ಪ್ರಾರಂಭಿಸಬೇಕು ಎಂದು ಮನವಿ ಮಾಡಿದರು.



ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಹೆಚ್ಚಿಸಬೇಕು. ಸಂಚಾರಿ ವೈದ್ಯಕೀಯ ವಾಹನ (ಮೊಬೈಲ್ ಕ್ಲಿನಿಕ್) ವ್ಯವಸ್ಥೆ ಮಾಡಬೇಕು. ಪ್ರತಿ ಗ್ರಾಮಗಳಲ್ಲಿ ಆರೋಗ್ಯ ತಪಾಸಣಾ ಶಿಬಿರ ಹೆಚ್ಚಿಸಬೇಕು. ಜನರಲ್ಲಿ ಆರೋಗ್ಯ ಸಾಕ್ಷರತೆ ಮೂಡಿಸಲು ಪರಿಣಾಮಕಾರಿ ಯೋಜನೆ ರೂಪಿಸಬೇಕು ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ಹೆಚ್ಚುತ್ತಿರುವ ಮದ್ಯದ ಅಂಗಡಿ, ಬಾರ್ ಮತ್ತು ರೆಸ್ಟೋರೆಂಟ್‌ಗಳ ಮೇಲೆ ಕಡಿವಾಣ ಹಾಕಬೇಕು. ಹೊಸದಾಗಿ ಪರವಾನಗಿ ನೀಡಬಾರದು. ಗಾಂಜಾ , ಡ್ರಗ್ಸ್‌ನಂತಹ ಮಾದಕ ಪದಾರ್ಥಗಳ ಮಾರಾಟಕ್ಕೆ ಸಂಪೂರ್ಣ ಕಡಿವಾಣ ಹಾಕಬೇಕೆಂದು ಒತ್ತಾಯಿಸಿದರು.

ಜಿಲ್ಲೆಗೆ ಮಂಜೂರಾದ 340 ವೈದ್ಯರ ಪೈಕಿ 117 ಹುದ್ದೆ ಖಾಲಿಯಿವೆ. 36 ತಜ್ಞ ವೈದ್ಯರು, 22 ತುರ್ತು ಚಿಕಿತ್ಸಾ ವೈದ್ಯಾಧಿಕಾರಿ ಮತ್ತು 52 ಕರ್ತವ್ಯ ನಿರತ ವೈದ್ಯಾಧಿಕಾರಿಗಳಿಲ್ಲ. 1856 ವೈದ್ಯಕೀಯ ಸಿಬ್ಬಂದಿ ಪೈಕಿ 815 ಖಾಲಿ ಇವೆ. 824 ವೈದ್ಯಕೀಯೇತರ ಹುದ್ದೆಗಳಲ್ಲಿ 664 ಖಾಲಿ ಇವೆ. ಜಿಲ್ಲಾಸ್ಪತ್ರೆಯಲ್ಲಿ 7 ಆ್ಯಂಬುಲೆನ್ಸ್‌ಗಳಿದ್ದು 3 ದುರಸ್ತಿಯಲ್ಲಿವೆ ಎಂದು ಮಾಹಿತಿ ನೀಡಿದರು.

ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಉಪವಿಭಾಗಾಧಿಕಾರಿ ಮಾರುತಿ, ಪತ್ರಕರ್ತ ಆರ್.ಪಿ. ವೆಂಕಟೇಶ್ ಮೂರ್ತಿ, ಸಾಹಿತಿ ರೂಪ ಹಾಸನ, ದಲಿತ ಮುಖಂಡರಾದ ಹೆಚ್.ಕೆ. ಸಂದೇಶ್, ಟಿ.ಆರ್. ವಿಜಯಕುಮಾರ್, ಕೆಪಿಆರ್ ಎಸ್ ಜಿಲ್ಲಾಧ್ಯಕ್ಷ ಹೆಚ್.ಆರ್. ನವೀನ್ ಕುಮಾರ್, ಚಿನ್ನೇನಹಳ್ಳಿ ಸ್ವಾಮಿ, ಎಂ.ಜಿ. ಪೃಥ್ವಿ, ಸೋಮಶೇಖರ್, ಗೊರೂರು ರಾಜು ಮತ್ತಿತರರಿದ್ದರು.

# ಅರಸೀಕೆರೆಯಲ್ಲಿ ಅರ್ಥಪೂರ್ಣ ಸ್ವಾತಂತ್ರ್ಯ ದಿನಾಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಸೀಕೆರೆ: ನಗರ ಸೇರಿದಂತೆ ತಾಲ್ಲೂಕಿನಾದ್ಯಂತ 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ತಾಲ್ಲೂಕು ಆಡಳಿತ ಸೇರಿ ನಾನಾ ಸಂಘ ಸಂಸ್ಥೆಗಳು ಪ್ರಗತಿಪರ ಸಂಘಟನೆಗಳು ಹಾಗೂ ಸಂಘ ಪರಿವಾರದ ವತಿಯಿಂದಲೂ ಸಹ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುವುದರೊಂದಿಗೆ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ನೆರೆದಿದ್ದ ಜನತೆಗೆ ಸಿಹಿ ಹಂಚಿ ಸಂಭ್ರಮಿಸಿದರು.

ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ವತಿಯಿಂದ ನಗರದ ಜೇನುಕಲ್ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ತಹಸೀಲ್ದಾರ್ ಸಂತೋಷ್ ಕುಮಾರ್ ಮಾತನಾಡಿ, ಬ್ರಿಟಿಷರ ದಾಸ್ಯದಿಂದ ಸ್ವಾಭಿಮಾನದಡೆಗೆ ಹೋರಾಟದ ಪ್ರತೀಕವೇ ಈ ಸ್ವಾತಂತ್ರ್ಯ. ತಲೆ ತಗ್ಗಿಸಿ ನಡೆಯುತ್ತಿದ್ದ ದೇಶದ ಜನತೆ ತಲೆ ಎತ್ತಿ ನಡೆಯುವಂತೆ ಮಾಡಿದ ಆ ಸುದಿನವೇ 1947 ಆಗಸ್ಟ್ 15 ಎಂದರು.

ಈ ದಿನವನ್ನು ದೇಶದ ಜನತೆ ಸುಲಭವಾಗಿ ಕಾಣಲಿಲ್ಲ. ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಸೇರಿ ಅನೇಕ ಮಹನೀಯರ ಹೋರಾಟ ತ್ಯಾಗ ಬಲಿದಾನದಿಂದ ಸಾಧ್ಯವಾಗಿದ್ದು ಎಂಬುದನ್ನು ನಾವ್ಯಾರೂ ಇಂದು ಮರೆಯುವಂತಿಲ್ಲ ಎಂದರು.

ಅಧ್ಯಕ್ಷತೆ ವಹಿಸಿದ್ದ ರಾಜ್ಯ ಗೃಹ ನಿರ್ಮಾಣ ಮಂಡಳಿ ಅಧ್ಯಕ್ಷ ಶಾಸಕ ಕೆ.ಎಂ. ಶಿವಲಿಂಗೇಗೌಡ ಮಾತನಾಡಿ, ಸ್ವತಂತ್ರ ಭಾರತ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ. ಆದರೆ ದೇಶದ ಒಳಗೆ ರಾಜ್ಯ ರಾಜ್ಯಗಳ ನಡುವೆ ಗಡಿ, ಜಲ ಹಂಚಿಕೆ ವಿಷಯ ಸಂಬಂಧಿಸಿದಂತೆ ಆಗುತ್ತಿರುವ ವೈ ಮನಸ್ಸನ್ನು ರಾಜ್ಯ ಹಾಗೂ ದೇಶವನ್ನು ನಡೆಸುತ್ತಿರುವ ಪ್ರಬುದ್ಧ ರಾಜಕಾರಣಿಗಳು ಸ್ವಹಿತ ಶಕ್ತಿಯನ್ನು ಬದಿಗಿಟ್ಟು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕಿದೆ. ಆ ಮೂಲಕ ಒಕ್ಕೂಟ ವ್ಯವಸ್ಥೆಯನ್ನು ಗಟ್ಟಿಗೊಳಿಸಬೇಕಿದೆ ಎಂದು ಅಭಿಪ್ರಾಯವನ್ನು ಹಂಚಿಕೊಂಡು.

ನಗರಸಭೆ ಅಧ್ಯಕ್ಷ ಎಂ. ಸಮೀವುಲ್ಲಾ, ಉಪಾಧ್ಯಕ್ಷ ಮನೋಹರ ಮೇಸ್ತ್ರಿ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಬಿ.ಎಸ್. ಅರುಣ್ ಕುಮಾರ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಧರ್ಮಶೇಖರ್, ಉಪಾಧ್ಯಕ್ಷ ಜವನಪ್ಪ, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಸತೀಶ್, ಡಿವೈಎಸ್ಪಿ ಬಿ.ಆರ್. ಗೋಪಿ, ನಗರಸಭೆ ಪೌರಾಯುಕ್ತ ಕೃಷ್ಣಮೂರ್ತಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಬಿ. ಮೋಹನ್ ಕುಮಾರ್, ತಾಲ್ಲೂಕು ಶಿಕ್ಷಣ ಸಲಹಾ ಸಮಿತಿ ಸದಸ್ಯ ವೈ.ಕೆ. ದೇವರಾಜ್ ಇತರರಿದ್ದರು.

ಸಮಾರಂಭದಲ್ಲಿ ಆರಕ್ಷಕ ಇಲಾಖೆ, ಹೋಂ ಗಾರ್ಡ್ಸ್, ಸ್ಕೌಟ್ ಅಂಡ್ ಗೈಡ್ಸ್ ಸೇರಿದಂತೆ ನಗರದ ನಾನಾ ಶಾಲೆಯ ವಿದ್ಯಾರ್ಥಿಗಳು ಸಮವಸ್ತ್ರದೊಂದಿಗೆ ನಡೆಸಿಕೊಟ್ಟ ಪಥಸಂಚಲನ ಹಾಗೂ ಸಭಾ ಕಾರ್ಯಕ್ರಮದ ಬಳಿಕ ಶಾಲಾ ಮಕ್ಕಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮ ಸ್ವಾತಂತ್ರ್ಯ ದಿನಾಚರಣೆಯ ಸಂಭ್ರಮದ ಕಳೆ ಹೆಚ್ಚಿಸಿತು.

# ಆಶಾ ಕಾರ್ಯಕರ್ತೆಯರ ಧರಣಿ ಮುಕ್ತಾಯ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆಶಾ ಕಾರ್ಯಕರ್ತೆಯರು ಕಳೆದ ಮೂರು ದಿನಗಳಿಂದ ನಡೆಸುತ್ತಿದ್ದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆಸುತ್ತಿದ್ದ ಅನಿರ್ದಿಷ್ಟಾವಧಿ ಧರಣಿ ಗುರುವಾರ ಅಂತ್ಯಗೊಂಡಿದೆ.

ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ರಾಜ್ಯ ಉಪಾಧ್ಯಕ್ಷ ಜಿ. ಹನುಮೇಶ್ ಮಾತನಾಡಿ, ನಮ್ಮ ಹಲವಾರು ಬೇಡಿಕೆಗಳಲ್ಲಿ ಒಂದು ಬೇಡಿಕೆಗೆ ಸಕಾರಾತ್ಮಕವಾಗಿ ಇಲಾಖೆಯಿಂದ ಸ್ಪಂದನೆ ಬಂದಿದೆ. ಹೀಗಾಗಿ ನಮ್ಮ ಅನಿರ್ದಿಷ್ಟಾವಧಿ ಧರಣಿಯನ್ನು ಅಂತ್ಯಗೊಳಿಸುತ್ತಿದ್ದೇವೆ. ಆಶಾ ಕಾರ್ಯಕರ್ತೆರು ಕೆಲಸ ಕಳೆದುಕೊಳ್ಳುತ್ತಾರೆ ಎಂದು ಈ ಧರಣಿ ನಡೆಸಿದ್ದು, ಧರಣಿಗೆ ಜಯ ದೊರಕಿದೆ. ಸಂಬಳ 10 ಸಾವಿರ ಎಂದು ಘೋಷಣೆ ಮಾಡಿದ್ದರೂ, ಇಲ್ಲಿವರೆಗೂ ಬೇಡಿಕೆ ಈಡೇರಿಲ್ಲ. ನಮ್ಮ ಬೇಡಿಕೆ ಈಡೇರದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

ಮುಖ್ಯವಾದ ಹಕ್ಕೊತ್ತಾಯಗಳಲ್ಲಿ ಮುಖ್ಯಮಂತ್ರಿಗಳು ಘೋಷಿಸಿದ ರಾಜ್ಯದ ಗೌರವಧನ ಮತ್ತು ಕೇಂದ್ರದ ಭಾಗಶಃ ಪ್ರೋತ್ಸಾಹ ಧನ ಸೇರಿಸಿ ಮಾಸಿಕ ಕನಿಷ್ಠ 10 ಸಾವಿರ ಗ್ಯಾರಂಟಿಯನ್ನು ಕಳೆದ ಏಪ್ರಿಲ್ ತಿಂಗಳಿನಿಂದಲೇ ಅನ್ವಯ ಆಗುವಂತೆ ಆದೇಶ ಹೊರಡಿಸಬೇಕು. ನಮ್ಮ ಬೇಡಿಕೆಗೆ ಸ್ಪಂದನೆ ಸಿಗದಿದ್ದರೆ ಮತ್ತೆ ಹೋರಾಟ ಮುಂದುವರೆಸುವುದಾಗಿ ಎಚ್ಚರಿಕೆ ನೀಡಿದ ಅವರು, ನಮ್ಮ ಧರಣಿ ಮೂರು ಪೂರೈಸಿದ್ದು, ಆಶಾ ಕಾರ್ಯಕರ್ತೆಯರು ಮಳೆಯನ್ನು ಲೆಕ್ಕಿಸದೆ ಧರಣಿಯಲ್ಲಿ ಪಾಲ್ಗೊಂಡಿದ್ದಾರೆ ಎಂದು ಹೇಳಿದರು.

ಪ್ರಮುಖರಾದ ಮಮತಾ, ಮೇಘನಾ, ನವೀನಾ, ಪುಷ್ಪಲತಾ, ಕೋಮಲ, ಗೀತಾ, ಲಲಿತಾ, ಮಂಜುಳಾ, ಗೌರಮ್ಮ, ಲಕ್ಷ್ಮಿ, ಶಿವಮ್ಮ, ತಾಹೀರಾ, ಕುಮಾರಿ ಇತರರಿದ್ದರು.

# ದಿಢೀರ್ ಎದುರಾದ ಕಾಡಾನೆ: ಗುಂಡಿಗೆ ಬಿದ್ದ ಕಾರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರೇಹಳ್ಳಿ: ಕಾಡಾನೆ ದಾಳಿಯಿಂದ ತಪ್ಪಿಸಿಕೊಳ್ಳಲು ಹೋಗಿ ಕಾರು ರಸ್ತೆ ಬದಿಯ ಗುಂಡಿಗೆ ಬಿದ್ದು, ಕಾರಿನಲ್ಲಿದ್ದ ಚಾಲಕ ಹಾಗೂ ತಾಯಿ, ಮಗು ಪ್ರಾಣಾಪಾಯದಿಂದ ಪಾರಾಗಿರುವ ಲಿಂಗಾಪುರ ಗ್ರಾಮದ ಬಳಿ ನಡೆದಿದೆ.

ಲಿಂಗಾಪುರ ಗ್ರಾಮ ವ್ಯಾಪ್ತಿಯ ಸ್ಮಶಾನದ ಹತ್ತಿರದ ರಸ್ತೆಯಲ್ಲೇ 10 ರಿಂದ 15 ಕಾಡಾನೆಗಳು ಗುಂಪು ನಿಂತಿತ್ತು. ಈ ವೇಳೆಗೆ ಕಾರು ಚಾಲಕ ಸಕಲೇಶಪುರ ಕಡೆಯಿಂದ ಬೇಲೂರು ಕಡೆಗೆ ತೆರಳುತ್ತಿದ್ದರು. ಕಾರು ಕಂಡು ಕಾಡಾನೆಗಳು ಘೀಳಿಡುತ್ತಾ ವೇಗವಾಗಿ ಕಾರಿನ ಕಡೆಗೇ ಹೆಜ್ಜೆ ಹಾಕಲು ಆರಂಭಿಸಿದವು. ಇದರಿಂದ ಹೆದರಿದ ಚಾಲಕ, ಗಾಬರಿಯಿಂದ ಕಾರನ್ನು ಹಿಮ್ಮುಖವಾಗಿ ತೆಗೆಯುವಾಗ ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ಗುಂಡಿಗೆ ಕಾರು ಬಿದ್ದಿತು. ಅದೃಷ್ಟವಶಾತ್ ಪ್ರಾಣಾಪಾಯದಿಂದ ಕಾರು ಚಾಲಕ ಪಾರಾಗಿದ್ದಾರೆ. ಅದಾದ ಬಳಿಕ ರಸ್ತೆ ದಾಟಿ ಕಾಫಿ ತೋಟದೊಳಗೆ ಕಾಡಾನೆಗಳು ತೆರಳಿವೆ. ಸುದ್ದಿ ತಿಳಿದ ಕೂಡಲೇ ಸ್ಥಳಕ್ಕೆ ಅರಣ್ಯ ಇಲಾಖೆ ಇಟಿಎಫ್, ಆರ್ಆರ್‌ಟಿ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರತಿದಿನವೂ ಒಂದಲ್ಲ ಒಂದು ಅವಘಡಗಳು ಸಂಭವಿಸುತ್ತಿದ್ದರೂ ಕಾಡಾನೆಗಳ ಹಾವಳಿ ನಿಯಂತ್ರಣಕ್ಕೆ ಮುಂದಾಗದ ಅರಣ್ಯ ಇಲಾಖೆ ಹಾಗೂ ಸರ್ಕಾರದ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

# ಅಭಿವೃದ್ಧಿಯತ್ತ ಭಾರತ ದಾಪುಗಾಲು: ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು: ಭಾರತ ದೇಶ ತನ್ನ ರಕ್ಷಣೆ ಜೊತೆಗೆ ಸರ್ವತೋಮುಖ ಅಭಿವೃದ್ಧಿಯಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು.

ಪಟ್ಟಣದ ಕ್ರೀಡಾಂಗಣದಲ್ಲಿ ತಾಲ್ಲೂಕು ಆಡಳಿತ ವತಿಯಿಂದ ಏರ್ಪಡಿಸಲಾಗಿದ್ದ 79ನೇ ಸ್ವಾತಂತ್ರ್ಯ ದಿನಾಚರಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮೊದಲು ದೇಶ ನಂತರ ನಾವು ಎಂಬ ಮನೋಭಾವನೆ ಬೆಳೆಸಿಕೊಂಡು ದೇಶದ ಅಭಿವೃದ್ಧಿಯಲ್ಲಿ ಯುವಕರು ಪಾತ್ರ ವಹಿಸಬೇಕು. ಭಾರತಾಂಬೆ ಎಂದಿಗೂ ಪ್ರಪಂಚದಲ್ಲಿ ತಲೆ ಎತ್ತಿ ನಿಲ್ಲುವಂತೆ ಮಾಡಲು ಎಲ್ಲರೂ ಶ್ರಮಿಸೋಣ ಎಂದರು.

ತಹಸೀಲ್ದಾರ್ ಮಲ್ಲಿಕಾರ್ಜುನ ಮಾತನಾಡಿ, ಯುವಕರು ಸಾಮಾಜಿಕ ಜಾಲತಾಣಗಳ ದುರುಪಯೋಗ ಮಾಡಿಕೊಳ್ಳುತ್ತಿರುವುದನ್ನು ಕಡಿಮೆ ಮಾಡಬೇಕು. ಸಮಾನತೆ, ನಾವು ನಮ್ಮ ದೇಶದ ಸಮಾನತೆ ಐಕ್ಯತೆಯನ್ನು ಕಾಪಾಡುತ್ತೇವೆ. ಪರಿಸರ ಸಂರಕ್ಷಿಸುತ್ತೇವೆ. ಅಸ್ವಚ್ಛತೆ ದೂರ ಮಾಡುತ್ತೇವೆ. ಶಿಕ್ಷಣವನ್ನು ಪ್ರೋತ್ಸಾಹಿಸುತ್ತೇವೆ ಎಂದು ಪ್ರತಿಜ್ಞೆ ಮಾಡೋಣ ಎಂದರು.

ಸಾಧಕರಿಗೆ ಸನ್ಮಾನ:

ಸಮಾರಂಭದಲ್ಲಿ ಸಮಾಜ ಸೇವೆ ಕ್ಷೇತ್ರಗದಲ್ಲಿ ಸಾಧನೆ ಮಾಡಿದ ಹೆಚ್.ಪಿ. ಮೋಹನ್, ಪತ್ರಿಕಾ ಮಾಧ್ಯಮದಿಂದ ಹೆಚ್.ಡಿ. ಪ್ರದೀಪ್, ಪೌರ ಕಾರ್ಮಿಕ ಮಹಿಳೆ ನಾಗರತ್ನ, ಎಸ್ಎಸ್ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಎಂ.ಪಿ. ಭುವನ್, ಕ್ರೀಡೆಯಿಂದ ಡಿ.ಜಿ. ಭವ್ಯ, ಮಾಜಿ ಸೈನಿಕ ಹವಾಲ್ದಾರ್ ಸಿ.ಎಸ್. ಆದರ್ಶ್, ಆರೋಗ್ಯ ಇಲಾಖೆ ಅಬುಬುಕರ್, ಶಿಕ್ಷಣ ಇಲಾಖೆ ಎಂ. ಎಲ್. ಎಲಿಜಬೆತ್, ಸರ್ಕಾರಿ ಸೇವೆ ಸವಿತಾ, ಕೃಷಿಯಲ್ಲಿ ಧರ್ಮಲಿಂಗಂ, ಕಂದಾಯ ಇಲಾಖೆ ಅಂಜುಮ್ ಕಿಲ್ಲೆದಾರ್, ಸರ್ವೆ ಸೂಪರ್ ವೈಸರ್ ಮಂಜೇಗೌಡ, ಶಿಕ್ಷಣ ಇಲಾಖೆ ಕೆ. ಎಲ್. ಪುರುಷೋತ್ತಮ, ಪೊಲೀಸ್ ಇಲಾಖೆ ಹಬೀಬ್, ನವೀನ್, ಮೋಹನ್ ಅವರನ್ನು ಸನ್ಮಾನಿಸಲಾಯಿತು.

ಪಟ್ಟಣ ಪಂಚಾಯಿತಿ ಅಧ್ಯಕ್ಷೆ ತಾಹೆರಾ ಬೇಗಂ, ಬಿಇಒ ಎ.ಜೆ. ಕೃಷ್ಣೇಗೌಡ, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಸುಬ್ರಹ್ಮಣ್ಯ, ಪೊಲೀಸ್ ಇನ್ಸ್‌ಪೆಕ್ಟರ್ ಮೋಹನ್‌ರೆಡ್ಡಿ, ಪ.ಪಂ. ಮುಖ್ಯಾಧಿಕಾರಿ ಮಂಜುನಾಥ್, ತಾಲ್ಲೂಕು ವೈದ್ಯಾಧಿಕಾರಿ ಡಾ. ನಿಸಾರ್ ಫಾತಿಮ, ಆರ್‌ಎಫ್‌ಒ ರಾಥೋಡ್ ಸುನಿಲ್, ನಾಗರಿಕ ಹೋರಾಟ ಸಮಿತಿ ಅಧ್ಯಕ್ಷ ಕೆ.ಎಸ್. ಮಂಜೇಗೌಡ, ವರದರಾಜು, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶಾಂತಕೃಷ್ಣ, ರಂಗಯ್ಯ ಹಾಗೂ ಇತರರಿದ್ದರು.

# ಬನಶಂಕರಿ ಅಮ್ಮ ಮಹಾದ್ವಾರ ಉದ್ಘಾಟನೆ ನಾಳೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲ್ಲೂಕಿನ ತೊಳಲು-ಸಿದ್ದರಹಳ್ಳಿ ಗ್ರಾಮದಲ್ಲಿ ಆ. 17ರ ಭಾನುವಾರ ಶ್ರೀ ಬನಶಂಕರಿ ಅಮ್ಮನವರ ಮಹಾದ್ವಾರ ಉದ್ಘಾಟನೆ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಿದ್ದರಹಳ್ಳಿ ದೇವಾಂಗ ಸಂಘದ ಅಧ್ಯಕ್ಷ ಎಸ್.ಬಿ. ಸುರೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ದಯಾನಂದಪುರಿ ಸ್ವಾಮೀಜಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಶನಿವಾರ ಸಂಜೆ ಗೋದೂಳಿ ಲಗ್ನದಲ್ಲಿ ಬನಶಂಕರಿ ಅಮ್ಮನವರಿಗೆ ಅಭಿಷೇಕ, ಕುಂಕುಮಾರ್ಚನೆ, ಪಂಚ ಪ್ರಧಾನ ಕಳಸ ಪೂಜೆ, ಮಹಾಮಂಗಳಾರತಿಯೊಂದಿಗೆ ಪ್ರಸಾದ ವಿನಿಯೋಗ ಹಮ್ಮಿಕೊಳ್ಳಲಾಗಿದೆ. ಸಂಜೆ 7 ಗಂಟೆಗೆ ಅಮ್ಮನವರ ಮಹಾದ್ವಾರದ ಬಳಿ ವಾಸ್ತುಹೋಮ, ಸುದರ್ಶನ ಹೋಮ, ಕಳಸ ಆದಿವಾಸ ಹೋಮಗಳು ನೆರವೇರಲಿದೆ. ಆ. 17 ರಂದು ಗಂಗಾಪೂಜೆ ನಡೆಸಿ ದೇಗುಲದಿಂದ ಮಹಾದ್ವಾರದವರೆಗೆ ಗಂಗಾ ಕಳಸ ಹಾಗೂ ಅಮ್ಮನವರ ಅಡ್ಡೆಯ ಮೆರವಣಿಗೆ ನಡೆಯಲಿದೆ. ನಂತರ 10 ಗಂಟೆಗೆ ಶ್ರೀ ದಯಾನಂದಪುರಿ ಸ್ವಾಮೀಜಿ ಮಹಾದ್ವಾರ ಉದ್ಘಾಟನೆ ನೆರವೇರಿಸಲಿದ್ದಾರೆ. ರಾಜ್ಯಸಭಾ ಸದಸ್ಯ ಕೆ. ನಾರಾಯಣ, ಶಾಸಕ ಎಚ್.ಕೆ. ಸುರೇಶ್, ಮಾಜಿ ಶಾಸಕ ಎಂ.ಡಿ. ಲಕ್ಷ್ಮಿನಾರಾಯಣ, ರಾಜ್ಯದೇವಾಂಗ ಸಂಘದ ಅಧ್ಯಕ್ಷ ಡಾ. ರಮೇಶ್, ತಾಲ್ಲೂಕು ಸಂಘದ ಅಧ್ಯಕ್ಷ ವಸಂತ, ಶೇಖರ್, ಬನಶಂಕರಿ ಬಳಗದ ಅಧ್ಯಕ್ಷ ಸ್ವಾಮಿ ಮತ್ತಿತರರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬನಶಂಕರಿ ಬಳಗದ ಅಧ್ಯಕ್ಷ ಸ್ವಾಮಿ, ಗ್ರಾಪಂ ಮಾಜಿ ಅಧ್ಯಕ್ಷ ಸಿದ್ದರಹಳ್ಳಿ ಹಾಲಪ್ಪಶೆಟ್ಟಿ, ಗ್ರಾಮಸ್ಥರಾದ ಎಸ್.ಎಸ್. ಸುರೇಶ್, ಕಿರಣ್ ಇದ್ದರು.

# ನಾಶಪಡಿಸಿದ ಗಿಡಗಳ ಕಂಡು ಮರುಗಿದ ಸಾಲುಮರದ ತಿಮ್ಮಕ್ಕ

ಬೇಲೂರು: ತಾಲ್ಲೂಕು ಕಚೇರಿ ಆವರಣದಲ್ಲಿ ನೆಟ್ಟಿದ್ದ ಗಿಡಗಳನ್ನು ಕಿತ್ತು ಹಾಕಿರುವುದು ಬೇಸರ ತರಿಸಿದೆ ಎಂದು ರಾಜ್ಯ ಸರ್ಕಾರದ ಪರಿಸರ ರಾಯಭಾರಿ ಡಾ. ಸಾಲುಮರದ ತಿಮ್ಮಕ್ಕ ಹೇಳಿದರು.

ಪಟ್ಟಣದ ತಾಲ್ಲೂಕು ಕಚೇರಿ ಆವರಣಕ್ಕೆ ಗುರುವಾರ ಭೇಟಿ ನೀಡಿ ಮಾತನಾಡಿದ ಅವರು, ನಮ್ಮ ಟ್ರಸ್ಟ್ ವತಿಯಿಂದ ನೆಡಲಾಗಿದ್ದ ನೆರಲೆ ಹಾಗೂ ಇತರ ಗಿಡಗಳನ್ನು ಕಿತ್ತು ಹಾಕಿರುವುದು ನೋವು ತರಿಸಿದೆ ಎಂದರು.

ಸಾಲುಮರದ ತಿಮ್ಮಕ್ಕ ದತ್ತು ಪುತ್ರ ಬಳ್ಳೂರು ಉಮೇಶ್ ಅವರು ಮಾತನಾಡಿ, ಗಿಡಗಳನ್ನು ಕಿತ್ತುಹಾಕಿರುವ ಬಗ್ಗೆ ತಿಮ್ಮಕ್ಕನವರಿಗೆ ತಿಳಿಸಿದಾಗ ಅವರು ಬೇಸರ ಮಾಡಿಕೊಂಡರು. ಅವರೇ ಹಠ ಹಿಡಿದು ನೋಡಲೇಬೇಕೆಂದು ಇಲ್ಲಿಗೆ ಬಂದಿದ್ದಾರೆ. ಗಿಡ ಮರ ಬೆಳೆಸುವುದು ಎಷ್ಟು ಕಷ್ಟ ಎಂಬುದು ಎಲ್ಲರಿಗೂ ಗೊತ್ತು. ಹೀಗಿರುವಾಗ ಗಿಡಗಳನ್ನು ಕಿತ್ತುಹಾಕಲು ಹೇಗೆ ಮನಸ್ಸು ಬಂತು ಎಂದು ಅಳಲು ತೋಡಿಕೊಂಡರು.

ಈ ಬಗ್ಗೆ ತಹಶೀಲ್ದಾರ್ ಅವರನ್ನು ಕೇಳಿದಾಗ ಅವರು, ನಾನೇ ಕಿತ್ತು ಹಾಕಿರುವುದು ಏನಾದರೂ ಮಾಡಿಕೊಳ್ಳಿ ಎಂದು ಉಡಾಫೆ ಉತ್ತರ ನೀಡಿದ್ದಾರೆ. ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರಿಗೂ ವಿಚಾರ ತಿಳಿಸಿದ್ದೇನೆ. ಶೀಘ್ರದಲ್ಲೇ ಖುದ್ದಾಗಿ ಭೇಟಿಯಾಗಿ ತಹಶೀಲ್ದಾರ್ ವಿರುದ್ಧ ಕ್ರಮಕ್ಕೆ ಆಗ್ರಹಿಸುತ್ತೇನೆ ಎಂದರು.

# ಮತಗಳ್ಳತನ ವಿರೋಧಿಸಿ ಪ್ರತಿಭಟನೆ

ಹೊಳೆನರಸೀಪುರ: ಕಳೆದ ಲೋಕಸಭಾ ಚುನಾವಣೆಯಲ್ಲಿ ದೇಶಾದ್ಯಂತ ಮತಗಳ್ಳತನ ನಡೆದಿದೆ ಎಂದು ಆರೋಪಿಸಿ ಪಟ್ಟಣದಲ್ಲಿ ಕಾಂಗ್ರೆಸ್‌ನಿಂದ ಮೇಣದ ಬತ್ತಿ ಪ್ರತಿಭಟನೆ ನಡೆಸಲಾಯಿತು.



ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ತರುವ ಆಘಾತಕಾರಿ ಘಟನೆಗಳು ನಡೆಯುತ್ತಿವೆ. ಚುನಾವಣಾ ಆಯೋಗದ ಮೇಲೆ ನಂಬಿಕೆಯಿದ್ದು ಆಗಿರುವ ಲೋಪ ಸರಿಪಡಿಸಿ ಸಂವಿಧಾನದ ಆಶಯಗಳನ್ನು ರಕ್ಷಿಸಬೇಕು. ಬಿಹಾರ, ಪಶ್ಚಿಮ ಬಂಗಾಳ, ಅಸ್ಸಾಂನಲ್ಲಿ ನಡೆದಿರುವ ಮತಗಳ್ಳತನ ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ. ರಾಜ್ಯದ ಜನರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಬೇಕು. ಷಡ್ಯಂತ್ರದ ವಿರುದ್ಧ ಪ್ರತಿಭಟನೆ ನಡೆಸಬೇಕು ಎಂದರು.

# ಸಿಎಂ ಮಾತು ಹೈಕಮಾಂಡ್ ಕೇಳಲಿಲ್ಲ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನನ್ನನ್ನು ಸಚಿವ ಸಂಪುಟದಲ್ಲಿ ಉಳಿಸಿಕೊಳ್ಳುವ ಸಲುವಾಗಿ ಹೈಕಮಾಂಡ್ ನಾಯಕರ ಮನವೊಲಿಸಲು ಸಾಕಷ್ಟು ಪ್ರಯತ್ನ ಪಟ್ಟಿದ್ದಾರೆ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಅವರ ಮಾತನ್ನು ಹೈಕಮಾಂಡ್ ಕೇಳಲೇ ಇಲ್ಲ. ನನ್ನ ವಿರುದ್ಧ ದೊಡ್ಡ ಷಡ್ಯಂತ್ರ ಮಾಡಲಾಗಿದೆ. ಮುಖ್ಯಮಂತ್ರಿ ಮನೆಯಿಂದ ವಿಧಾನಸೌಧಕ್ಕೆ ಬರುವ ಹೊತ್ತಿಗೆ ಮಾಧ್ಯಮದವರೇ ತೋರಿಸಿರುವಂತೆ ಕಾರಲ್ಲಿ ಬಾಗಿಲು ಹಾಕೊಂಡು ಮಾತನಾಡುತ್ತಾ ಇದ್ದರಲ್ಲವೇ. ಅದು ಅದೇ ವಿಷಯ (ರಾಜೀನಾಮೆ). ಕಾರಲ್ಲಿ ಬಾಗಿಲು ಹಾಕೊಂಡು ಸುಮಾರು 20 ನಿಮಿಷ ಮಾತನಾಡಿದ್ದಾರೆ. ಪಾಪ ಅವರು ಹೈಕಮಾಂಡ್ ಅನ್ನು ಮನವೊಲಿಸಲು ಪ್ರಯತ್ನ ಮಾಡಿದ್ದಾರೆ. ಆದರೆ ಹೈಕಮಾಂಡ್ ಒಪ್ಪಲೇ ಇಲ್ಲ. ಈ ಬಗ್ಗೆ ನನಗೆ ಅವರು ತಿಳಿಸಿದರು. ವಿಧಿ ಇಲ್ಲ ಎಂದರು. ಆಯ್ತು ಸರ್ ಎಂದೆ ಎಂದು ರಾಜಣ್ಣ ಹೇಳಿದರು.

# ಮತದಾರರ ಪಟ್ಟಿಯಿಂದ ನನ್ನ ಹೆಸರು ಡಿಲೀಟ್ ಆಗಿತ್ತು

## ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಗಂಭೀರ ಆರೋಪ : ಆಯೋಗದ ವಿರುದ್ಧ ಆಕ್ರೋಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಮತಗಳ್ಳತನ ದೇಶಾದ್ಯಂತ ಆಗಿದ್ದು ಚುನಾವಣಾ ಆಯೋಗ ನಿಷ್ಪಕ್ಷಪಾತ ಕೆಲಸ ಮಾಡಬೇಕು. 2009ರಲ್ಲಿ ಈ ಅನುಭವ ನನಗೂ ಆಗಿದೆ. ಮತದಾರರ ಪಟ್ಟಿಯಿಂದ ನನ್ನ ಹೆಸರು ತೆಗೆದು ಹಾಕಲಾಗಿತ್ತು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿ, ಕಳೆದ ಲೋಕಸಭೆ ಚುನಾವಣೆಯಲ್ಲಿ ಮಹದೇವಪುರದಲ್ಲಿ ಹೆಚ್ಚುವರಿ ಮತದಾರರ ಸೇರ್ಪಡೆಯಾಗಿದೆ. ಆದರೂ ಚುನಾವಣಾ ಆಯೋಗ ಇದನ್ನು ಒಪ್ಪಲು ರೆಡಿ ಇಲ್ಲ. ನಿಷ್ಪಕ್ಷಪಾತವಾಗಿ ಕೆಲಸ ಮಾಡುತ್ತಿಲ್ಲ. ಒಂದೇ ಹೆಸರು ಹಲವು ಕಡೆ ಇದೆ. ಆದರೂ ಆಯೋಗ ಬಿಜೆಪಿ ಪರವಾಗಿ ಕೆಲಸ ಮಾಡುತ್ತಿರುವ ಅನುಮಾನ ಇದೆ. ಪ್ರಜಾಪ್ರಭುತ್ವದ ಪಾವಿತ್ರ್ಯತೆ ಉಳಿಯಬೇಕೆಂದರೆ ನಿಷ್ಪಕ್ಷಪಾತ ಕೆಲಸ ನಡೆಯಬೇಕು. ಇಡಿ, ಸಿಬಿಐ ನಂತೆಯೇ ಎಲೆಕ್ಷನ್ ಕಮೀಷನ್ ನಡೆದುಕೊಳ್ಳುತ್ತಿದೆ ಎಂದು ದೂರಿದರು. ಆಯೋಗವು ಸ್ವತಂತ್ರವಾಗಿ ಕಾರ್ಯನಿರ್ವಹಿಸಬೇಕು. ಆದರೀಗ ಅದರ ಕಾರ್ಯವ್ಯಾಪ್ತಿ ಮೇಲೆ ಅನುಮಾನ ಮೂಡಿವೆ ಎಂದರು.

ಮತಗಳ್ಳತನದ ಬಗ್ಗೆ ಮಾತನಾಡಿ ಸಚಿವ ಸ್ಥಾನ ಕಳೆದುಕೊಂಡ ರಾಜಣ್ಣ ಅವರ ಬಗ್ಗೆ ಕೇಳಿದ ಪ್ರಶ್ನೆಗೆ, ಅದು ಪಕ್ಷದ ತೀರ್ಮಾನ, ರಾಜಣ್ಣ ಅವರು ನನಗೆ ಆತ್ಮೀಯರು, ನನ್ನ ಹಿತೈಷಿಗಳು, ನಾನು ಅವರಿಗೆ ಗೌರವ ಕೊಡುತ್ತೇವೆ. ಮಂತ್ರಿಯಾಗಿ ಒಳ್ಳೆಯ ಕೆಲಸ ಮಾಡಿದ್ದಾರೆ. ಮುಂದೆ ದೆಹಲಿಗೆ ಹೋಗುವುದಾಗಿ ಹೇಳಿದ್ದಾರೆ. ಅದಕ್ಕೂ ಮುನ್ನ ಈ ಬಗ್ಗೆ ವಿಶ್ಲೇಷಣೆ ಮಾಡುವುದು ಸರಿಯಲ್ಲ ಎಂದು ಉತ್ತರಿಸಿದರು.

ಜಿಲ್ಲೆಯಲ್ಲಿ ನಾನಾ ಸಮಸ್ಯೆಗಳಿವೆ, ಜನಪ್ರತಿನಿಧಿಗಳು, ಅಧಿಕಾರಿಗಳ ಸಹಕಾರ ಪಡೆದು, ಏನೆಲ್ಲಾ ಮಾಡಬಹುದೋ ಅದನ್ನು ಮಾಡಿ ಮತ್ತಷ್ಟು ಪ್ರಗತಿ ಪಥದತ್ತ ಕೊಂಡೊಯ್ಯಲು ಪ್ರಾಮಾಣಿಕ ಪ್ರಯತ್ನ ಮಾಡುವೆ ಎಂದು ನೂತನ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

### ಜಿಲ್ಲೆ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ

ಬೆಂಗಳೂರು ಶಾಸಕನಾದ ನನಗೆ ಹಾಸನದಲ್ಲಿ ಕೆಲಸ ಮಾಡಲು ಅವಕಾಶ ಸಿಕ್ಕಿರುವುದು ಸೌಭಾಗ್ಯ. ಹಾಸನ ರಾಜ್ಯದ ಪ್ರಮುಖ ಜಿಲ್ಲೆ, ಹಿಂದೆ ಆಗಿರುವ ಕೆಲಸಗಳನ್ನು ಮುಂದುವರಿಸಲು ಶಕ್ತಿ ಮೀರಿ ಪ್ರಯತ್ನ ಮಾಡುವೆ. ನನ್ನ ಕೈಲಾದ ಅಳಿಲು ಸೇವೆ ಸಲ್ಲಿಸುವೆ, ಯಾವುದರಲ್ಲೂ ಪೈಪೋಟಿ ಮಾಡಲ್ಲ, ಸಂಸದರು, ಶಾಸಕರು, ಅಧಿಕಾರಿಗಳ ಸಹಕಾರದಿಂದ ಜಿಲ್ಲೆಯ ಅಭಿವೃದ್ಧಿಗೆ ಕೈಲಾದ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಇಂಥ ಅವಕಾಶ ಮುಂದೆ ಸಿಗಲ್ಲ, ಸಿಕ್ಕಾಗ ಸಾರ್ವಜನಿಕ ಸೇವೆಯನ್ನು ಸಾರ್ಥಕವಾಗಿ ಮಾಡಬೇಕು ಎಂದರು.

### ಮತ್ತೊಂದು ಸಮಿತಿ

ಹೆಚ್ಆರ್‌ಪಿ ಭೂ ಹಗರಣದ ಬಗ್ಗೆ ಕೇಳಿದ ಪ್ರಶ್ನೆಗೆ ಹಿಂದೆ ಐಎಎಸ್ ಅಧಿಕಾರಿಗಳ ಸಮಿತಿಯೇ ತನಿಖೆ ಮಾಡಿತ್ತು. 8600 ಕಡತಗಳಲ್ಲಿ 1200 ರಲ್ಲಿ ನೈಜತೆ ಇಲ್ಲ, 7 ಗುಂಟೆ ಜಮೀನು ಮುಳುಗಡೆಯಾಗಿದ್ದರೆ 4 ಎಕರೆ ಪಡೆದಿದ್ದಾರೆ. ಇದು ನಿನ್ನೆ-ಮೊನ್ನೆ ಸಮಸ್ಯೆ ಅಲ್ಲ. ಪರಿಹಾರ ಮಾಡುವ ಬಗ್ಗೆ ಅವರೂ ಕೆಲ ಸಲಹೆ ಕೊಟ್ಟಿದ್ದಾರೆ. ನೈಜತೆ ಹೊಂದಿರುವ-ಇಲ್ಲದ ಪ್ರಕರಣ ಬೇರ್ಪಡಿಸಿ ನಂತರ ಹೇಳುವೆ, ಇದಕ್ಕೆ ಮತ್ತೊಂದು ಕಮಿಟಿ ಮಾಡಬೇಕಿದೆ. ಅರ್ಹರಿಗೆ ನ್ಯಾಯ ಸಿಗಬೇಕು. ಆ ಬಗ್ಗೆ ಮತ್ತಷ್ಟು ಅಧ್ಯಯನ ಮಾಡಿ ಮುಂದಿನ ಕ್ರಮ ಕೈಗೊಳ್ಳುವೆ ಎಂದು ತಿಳಿಸಿದರು.

### ತನಿಖೆ ನಡೆಯಲಿ

ಧರ್ಮಸ್ಥಳ ಶವರಹಸ್ಯ ಪ್ರಕರಣ ಕುರಿತು ಎಸ್ಐಟಿ ತನಿಖೆ ನಡೆಸುತ್ತಿದ್ದರೂ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ನೀಡಿರುವ ಹೇಳಿಕೆ ಕುರಿತ ಪ್ರಶ್ನೆಗೆ ಪ್ರಕರಣದ ಸತ್ಯಾಂಶ ಹೊರ ತೆಗೆಯಲು ಎಸ್ಐಟಿ ರಚಿಸಲಾಗಿದೆ. ಉತ್ತಮ ರೀತಿಯ ತನಿಖೆ ನಡೆಯುತ್ತಿದೆ. ಡಿಸಿಎಂ ಅವರು ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ. ಆದರೆ ತನಿಖೆ ಮೇಲೆ ನನಗೆ ನಂಬಿಕೆ ಇದೆ. ಸತ್ಯ ಹೊರ ಬರುವ ವಿಶ್ವಾಸ ವ್ಯಕ್ತಪಡಿಸಿದರು. ತಪ್ಪು ಮಾಡಿದವರ ವಿರುದ್ಧ ಕ್ರಮ ಆಗಲಿದ್ದು, ಎಸ್ಐಟಿ ತನಿಖೆ ನಡೆಯಲಿ ಎಂದರು.

# ಇತಿಹಾಸದಲ್ಲಿ ಈ ದಿನ

## ಆಗಸ್ಟ್-16

1777: ಅಮೇರಿಕಾದ ಸ್ವಾತಂತ್ರ್ಯ ಸಮರದ ವೇಳೆ ಬೆನ್ನಿಂಗ್ಟನ್ ಯುದ್ಧದಲ್ಲಿ ಅಮೇರಿಕಾ ಪಡೆಗೆ ಜಯ.

1946: ಭಾರತದಲ್ಲಿ ಡೈರೆಕ್ಟ್ ಆಕ್ಷನ್ ಡೇಟ ಎಂಬ ಹೆಸರಿನಲ್ಲಿ ದಂಗೆಗಳು ಪ್ರಾರಂಭವಾಗಿ ಸಾವಿರಾರು ಜನರು ಸಾವನ್ನಪ್ಪಿದರು.

1960: ಸೈಪ್ರಸ್ ದೇಶವು ಬ್ರಿಟಿಷರಿಂದ ಸ್ವಾತಂತ್ರ್ಯ ಪಡೆದಿತು.

1962: ಅಮೇರಿಕಾದ ನಾಸಾ ಸಂಸ್ಥೆ ಮೊದಲ ಭೂ-ಸಂಕೇತ ಉಪಗ್ರಹ ಟೆಲ್ಸ್ಟಾರ್ 1 ಮೂಲಕ ದೂರದರ್ಶನ ಪ್ರಸಾರ ಆರಂಭಿಸಿತು.

2008: ಜಮೈಕಾದ ಸ್ಪ್ರಿಂಟರ್ ಉಸೇನ್ ಬೋಲ್ಟ್ ಪೆಕಿಂಗ್ ಒಲಿಂಪಿಕ್ಸ್‌ನಲ್ಲಿ 100 ಮೀ. ಓಟವನ್ನು 9.69 ಸೆಕೆಂಡುಗಳಲ್ಲಿ ಪೂರ್ಣಗೊಳಿಸಿ ವಿಶ್ವ ದಾಖಲೆ ಬರೆದರು.

### ಜನನ

1920: ಚಾರ್ಲಿ ಪಾರ್ಕ್, ಅಮೇರಿಕಾದ ಪ್ರಸಿದ್ಧ ಜಾಜ್ ಸಂಗೀತಗಾರ.

1954: ಜೇಮ್ಸ್ ಕ್ಯಾಮೆರಾನ್, ಹಾಲಿವುಡ್ ನಿರ್ದೇಶಕ.


1958: ಮಡೋನಾ, ಅಮೇರಿಕಾದ ಗಾಯಕಿ, ನಟಿ ಮತ್ತು ಪಾಪ್ ಐಕಾನ್.

### ಮರಣ

1948: ಬಾಬ್ ಎಲಿಯಟ್, ಅಮೇರಿಕಾದ ಹಾಸ್ಯನಟ.

1977: ಎಲ್ವಿಸ್ ಪ್ರೆಸ್ಲಿ, ಅಮೇರಿಕಾದ ಪ್ರಸಿದ್ಧ ಗಾಯಕ, ನಟ, ರಾಕ್ ಎಂಡ್ ರೋಲ್‌ನ ರಾಜ.

# ಸೌಹಾರ್ದತೆಯಿಂದ ಹಬ್ಬ ಆಚರಿಸಲು ಪೊಲೀಸರ ಸೂಚನೆ



ಬೇಲೂರು: ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸಲು ಪ್ರತಿಯೊಬ್ಬರು ಸಹಕರಿಸಬೇಕು ಎಂದು ಹಳೇಬೀಡು ಪೊಲೀಸ್ ವೃತ್ತ ನಿರೀಕ್ಷಕ ಜಗದೀಶ್ ಹೇಳಿದರು.

ಗಣೇಶ ಚತುರ್ಥಿ ಹಾಗೂ ಈದ್ ಮಿಲಾದ್ ಹಬ್ಬದ ಅಂಗವಾಗಿ ಪಟ್ಟಣದ ಹಳೇಬೀಡು ಪೊಲೀಸ್ ವೃತ್ತ ನಿರೀಕ್ಷಕರ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಶಾಂತಿ ಸಭೆಯಲ್ಲಿ ಮಾತನಾಡಿ, ಮುಂದಿನ ದಿನಗಳಲ್ಲಿ ಸಾಲು ಸಾಲು ಹಬ್ಬಗಳು ಬರುತ್ತಿವೆ. ಈ ಸಂದರ್ಭ ಯಾವುದೇ ಊಹಾಪೋಹಗಳಿಗೆ ಕಿವಿಗೊಡಬಾರದು. ಪ್ರಚೋದನೆಗೆ ಒಳಗಾಗಿ ಶಾಂತಿ ಕದಡುವ ಕೆಲಸಕ್ಕೆ ಯಾರೂ ಮುಂದಾಗಬಾರದು ಎಂದರು.

ಕಾನೂನು ಮೀರಿ ನಡೆದುಕೊಳ್ಳಬಾರದು. ಹಬ್ಬಗಳನ್ನು ಎಲ್ಲ ಧರ್ಮಿಯರು ಸೌಹಾರ್ದದಿಂದ ಶಾಂತಿಯುತವಾಗಿ ಆಚರಿಸಬೇಕು ಎಂದರು.

# ಪ್ರತ್ಯೇಕ ಅಪಘಾತದಲ್ಲಿ ಇಬ್ಬರ ಸಾವು

ಹಾಸನ: ಬೊಲೆರೋ ವಾಹನ ಡಿಕ್ಕಿಯಾಗಿ ರಸ್ತೆ ಬದಿ ನಿಂತಿದ್ದ ಕೂಲಿ ಕಾರ್ಮಿಕ ಮಹಿಳೆ ಮೃತಪಟ್ಟಿರುವ ಘಟನೆ ಸಕಲೇಶಪುರ ತಾಲ್ಲೂಕು ನಟ್ಟಹಳ್ಳಿ ಸಮೀಪ ನಡೆದಿದೆ.

ಹೆನ್ನಲಿ ಗ್ರಾಮದ ರುಕ್ಮಿಣಿ (30) ಮೃತರು. ನಟ್ಟಹಳ್ಳಿ ಗ್ರಾಮದ ಮಹೇಶ್ ಅವರ ಕಾಫಿ ತೋಟಕ್ಕೆ ಬೊಲೆರೋ ಪಿಕಪ್ ವಾಹನದಲ್ಲಿ ಕೂಲಿ ಕೆಲಸಕ್ಕೆ ಹೋಗಿದ್ದ ಅವರು ವಾಪಾಸ್ ಊರಿಗೆ ಬರಲು ವಾಹನಕ್ಕಾಗಿ ಕಾದು ನಿಂತಿದ್ದರು. ರಸ್ತೆ ಬದಿ ನಿಂತಿದ್ದಾಗ ಚಾಲಕ ಜೋರಾಗಿ ವಾಹನ ಓಡಿಸಿಕೊಂಡು ಬಂದು ರುಕ್ಮಿಣಿಗೆ ಡಿಕ್ಕಿ ಮಾಡಿದ್ದಾನೆ. ತಲೆಗೆ ಬಲವಾದ ಪೆಟ್ಟು ಬಿದ್ದ ಹಿನ್ನಲೆಯಲ್ಲಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಗ್ಯಾಸ್ ಸಿಲಿಂಡರ್ ಲಾರಿ ಡಿಕ್ಕಿಯಾಗಿ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಬೇಲೂರು ತಾಲ್ಲೂಕು ಅಂಗಡಿಹಳ್ಳಿ ಗ್ರಾಮ ಸಮೀಪ ನಡೆದಿದೆ.

ಮಾದಿಹಳ್ಳಿ ಹೋಬಳಿ ಸೂಲದೇವರಹಳ್ಳಿ ಗ್ರಾಮದ ಕೃಷ್ಣ (21) ಮೃತ ಯುವಕ. ಸೂಲದೇವನಹಳ್ಳಿಯಿಂದ ಹಗರೆಗೆ ಬರುತ್ತಿದ್ದಾಗ ಬೇಲೂರು ಕಡೆಯಿಂದ ಬಂದ ಗ್ಯಾಸ್ ಸಿಲಿಂಡರ್ ಲಾರಿ ಡಿಕ್ಕಿಯಾಗಿದೆ. ಗಾಯಾಳು ಕೃಷ್ಣ ಅವರನ್ನು ಹಿಮ್ಸ್‌ಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248